## ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ ಅಫಜಲಪೂರ

**ಸಿಸಿ ನಂ.908/2022**

ಚಾಸಾ-19 ಫ್ರಾಸಾ-6

ಸತ್ಯ ಪ್ರತಿಜ್ಞೆಯ ಮೇರೆಗೆ ಪ್ರಮಾಣೀಕೃತ ಹೇಳಿಕೆ
ಪಡೆದುಕೊಳ್ಳಲಾಯಿತು.
ದಿನಾಂಕ: 21.06.2025.

| | | |
|---|---|---|
| ಹೆಸರು | : | ಆಯುಬ್ ಖಾನ |
| ತಂದೆಯ ಹೆಸರು | : | ರಿಯಾಸತ್ ಖಾನ |
| ವಯಸ್ಸು | : | 57 ವರ್ಷ |
| ಉದ್ಯೋಗ | : | ಪಿ.ಎಸ್.ಐ ., ಶಾಹಪುರ ಪೊಲೀಸ ಠಾಣೆ |
| ವಾಸಸ್ಥಳ | : | ಶಾಹಪೂರ |

-: **ಮುಖ್ಯ ವಿಚಾರಣೆ :- ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ :-**

ಏಪ್ರೀಲ್ 2021 ರಿಂದ ಜೂನ್ 2023 ರವರೆಗೆ ನಾನು ಅಫಜಲಪೂರ ಪೊಲೀಸ ಠಾಣೆಯಲ್ಲಿ ಎ.ಎಸ್.ಐ ಅಂತಾ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕ 09.10.2021 ರಂದು ನಾನು ಕರ್ತವ್ಯದಲ್ಲಿದ್ದಾಗ ರಾತ್ರಿ 08.10 ಕ್ಕೆ ಚಾಸಾ 1 ರವರು ಠಾಣೆಗೆ ಹಾಜರಾಗಿ ಒಂದು ಲಿಖಿತ ದೂರು ನೀಡಿದ್ದು, ಸದರಿ ದೂರನ್ನು ಸ್ವಿಕರಿಸಿ ಅದರ ಆಧಾರದ ಮೇರೆಗೆ ಗುನ್ನೆ ಸಂಖ್ಯೆ 155/2021 ಅನ್ನು ದಾಖಲಿಸಿಕೊಂಡು ಪ್ರ.ವ.ವ.ಯನ್ನು ಮಾನ್ಯ ನ್ಯಾಯಾಲಯಕ್ಕೆ ಮತ್ತು ನಮ್ಮ ಮೇಲಾಧಿಕಾರಿಗಳಿಗೆ ಕಳುಹಿಸಿಕೊಟ್ಟಿರುತ್ತೇನೆ. ತದನಂತರ ಮುಂದಿನ ತನಿಖೆಗಾಗಿ ಚಾಸಾ 20 ರವರಿಗೆ ಕಡತಗಳನ್ನು ವರ್ಗಾಯಿಸಿರುತ್ತೇನೆ.

ಸಾಕ್ಷಿಗೆ ದೂರಿನ ಪ್ರತಿಯನ್ನು ತೋರಿಸಿದ್ದು, ಸಾಕ್ಷಿಯು ಅದನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿಪಿ-**1** ಎಂದು ಮತ್ತು ಸಾಕ್ಷಿಯ ಸಹಿಯನ್ನು ನಿಪಿ-**1**(ಬಿ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ಪ್ರ.ವ.ವರದಿಯ ಪ್ರತಿಯನ್ನು ತೋರಿಸಿದ್ದು, ಸಾಕ್ಷಿಯು ಅದನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-**21** ಎಂದು ಮತ್ತು ಸಾಕ್ಷಿಯ ಸಹಿಯನ್ನು ನಿಪಿ-**21**(ಎ) ಎಂದು ಗುರುತಿಸಲಾಯಿತು.

ಪಾಟೀ ಸವಾಲುಃ ಆರೋಪಿ ಪರ ಶ್ರೀ **SGA** ವಕೀಲರಿಂದಃ-

ನಿಪಿ-1 ಅನ್ನು ಠಾಣೆಯಲ್ಲಿ ನಾನೇ ಟೈಪು ಮಾಡಿಸಿ ದೂರು ಪಡೆದಿರುತ್ತೇನೆ ಎಂದರೆ ಸರಿಯಲ್ಲ. ಪ್ರ.ವ.ವರದಿಯನ್ನು ನಮ್ಮ ಮೇಲಾಧಿಕಾರಿಗಳಿಗೆ ಅದೇ ದಿನ ಕಳುಹಿಸಿರುತ್ತೇನೆ. ಚಾಸಾ 1 ರವರಿಗೆ ಸಹಾಯ ಮಾಡಲು ಆರೋಪಿತನ ವಿರುದ್ಧ ಸುಳ್ಳು ದೂರು ದಾಖಲಿಸಿಕೊಂಡಿರುತ್ತೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆಃ - ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಇದೆ

ಸಿವಿಲ್ & ಪ್ರ.ದ.ನ್ಯಾ. ದಂಡಾಧಿಕಾರಿಗಳು
ಅಫಜಲಪೂರ